ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ರಾಜ್ಯದ ಶಿಕ್ಷಣ ಸಂಸ್ಥೆಗಳಲ್ಲಿ ಕಡ್ಡಾಯ ಭಾಷೆ ಕಲಿಕೆ ಅಧಿನಿಯಮ 2015ನ್ನು ಜಾರಿಗೊಳಿಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

784 (934) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ICSE, CBSE, IB, IGCS ಹಾಗೂ ಇನ್ನಿತರೆ ಪಠ್ಯಕ್ರಮ ಬೋಧಿಸುವ ಶಿಕ್ಷÀಣ ಸಂಸ್ಥೆಗಳಿವೆ ; (ರಾಜ್ಯ ಪಠ್ಯಕ್ರಮ ಹೊರತುಪಡಿಸಿ ವಿವರ ನೀಡುವುದು)

(ಆ) ಸದರಿ ಸಂಸ್ಥೆಗಳಲ್ಲಿ ಕಡ್ಡಾಯ ಭಾಷೆ ಕಲಿಕೆ ಅಧಿನಿಯಮ 2015ನ್ನು ಜಾರಿಗೆ ತರಲಾಗಿದೆಯೇ ; (ವಿವರ ನೀಡುವುದು)

(ಇ) ಭಾಷಾ ಕಲಿಕೆ ಅಧಿನಿಯಮ 2015ನ್ನು ಜಾರಿಗೆ ತರದಿರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) RTE ನಿಯಮದಡಿ ಎಷ್ಟು ಖಾಸಗಿ ಶಿಕ್ಷಣ ಸಂಸ್ಥೆಗಳು ಪ್ರವೇಶಾತಿಯನ್ನು ಅನುಷ್ಠಾನಗೊಳಿಸಿವೆ ; ಅನುಷ್ಠಾನಗೊಳಿಸದಿರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)